# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 133(118) |
| ಸದಸ್ಯರ ಹೆಸರು | : | ಶ್ರೀ ಕೆ.ಎಸ್ ನವೀನ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರ NEP ಜಾರಿಗೆ ತರವುದರ ಬದಲು SEP ತರುವುದಾಗಿ ಹೇಳಿದ್ದು ನಿಜವೇ; ಹಾಗಿದ್ದರೆ, ಕಾರಣವೇನು; | ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯಗಳಿಗೆ ವಿರೋಧ ಇಲ್ಲದಂತೆ ರಾಜ್ಯದಲ್ಲಿ ಪ್ರಾದೇಶಿಕ ಸಮತೋಲನ ಕಾಪಾಡುವ ದೃಷ್ಟಿಯಿಂದ ರಾಜ್ಯ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗಣವಾಗಿ ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಲು ಸರ್ಕಾರವು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತದೆ.<br><br>"ಕೇಂದ್ರ ಸರ್ಕಾರ ಜಾರಿಗೊಳಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯು ಒಕ್ಕೂಟ ವ್ಯವಸ್ಥೆಗೆ ಮಾರಕವಾಗಿರುವಂತಹ ಹಾಗೂ ಸಂವಿಧಾನ ಮತ್ತು ವಿರುದ್ಧವಾಗಿರುವ ಪ್ರಜಾಪ್ರಭುತ್ವಕ್ಕೆ ಅವೈಜ್ಞಾನಿಕ ಅಂಶಗಳನ್ನು ಒಳಗೊಂಡಿದೆ, ಬಹುಧರ್ಮ, ಬಹುಭಾಷೆ, ಬಹುಸಂಸ್ಕೃತಿ ಇರುವ ನಮ್ಮ ದೇಶಕ್ಕೆ ಏಕರೂಪದ ಶಿಕ್ಷಣ ವ್ಯವಸ್ಥೆ ಹೊಂದಿಕೊಳ್ಳುವುದಿಲ್ಲ. ರಾಜ್ಯದ ಅಸ್ಮಿತೆಯನ್ನು ಎತ್ತಿ ಹಿಡಿಯುವ, ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಿ ಯುವಜನರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸಬಲಗೊಳಿಸಲು ಒತ್ತು ನೀಡುವ ನಿಟ್ಟಿನಲ್ಲಿ ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಾಂಶಗಳನ್ನು ಒಳಗೊಂಡ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗುವುದು".<br><br>ಪ್ರಸ್ತುತ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ರದ್ದುಗೊಳಿಸಿರುವುದಿಲ್ಲ. ಬದಲಿಗೆ ದೇಶದಲ್ಲಿನ ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020 ಸೇರಿದಂತೆ ಇಲ್ಲಿಯವರೆಗೂ ರಚನೆಗೊಂಡು ಅನುಷ್ಠಾನಗೊಂಡಿರುವ ಎಲ್ಲಾ ಶಿಕ್ಷಣ ನೀತಿ ಆಯೋಗಗಳ ವರದಿಗಳನ್ನು ಪರಿಗಣಿಸಿ ಗುಣಾತ್ಮಕ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಶಾಲಾ ಮತ್ತು ಉನ್ನತ ಶಿಕ್ಷಣವನ್ನು ಜಾಗರೂಕತೆಯಿಂದ ಪರಿಶೀಲಿಸಿ ಸೂಕ್ತ ಯೋಜನೆಗಳನ್ನು ಶಿಫಾರಸ್ಸು ಮಾಡಲು ಶ್ರೇಷ್ಠ ಶಿಕ್‌ಷಣ ತಜ್ಞರಾದ Prof. Sukhdev Thorat, an eminent educationist, Indian Economist, Professor, Writer and Former, Chairman of UGC, New Delhi, ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಪ್ರಸ್ತುತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ರಾಜ್ಯ ಶಿಕ್ಷಣ ನೀತಿ ಆಯೋಗವು ಅಂತಿಮ ವರದಿಯನ್ನು ಇಲಾಖೆಗೆ ಸಲ್ಲಿಸಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ) | SEP ರಾಜ್ಯದಲ್ಲಿ ಜಾರಿಗೆ ತರುವುದು ಯಾವಾಗ ಇದರಿಂದ ವಿದ್ಯಾರ್ಥಿಗಳಿಗೆ ಆಗುವ ಅನುಕೂಲಗಳೇನು; | |
| ಇ) | NEP ಯನ್ನು ಜಾರಿಗೆ ಮಾಡದಿರಲು ಕಾರಣವೇನು? (ವಿವರಗಳೊಂದಿಗೆ ವಿವರಿಸುವುದು) | |

**ಸಂಖ್ಯೆ: ಇಪಿ 123 ಪಿಎಂಸಿ 2026**

**(ಎಸ್.ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು